

ದ ರೂರಲ್ ಮಿರರ್.ಕಾಂ

# ಅಡಿಕೆ ಬೆಳೆಗೆ ಕೊಳೆರೋಗದ ಭೀತಿ



ಜುಲೈ ತಿಂಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿರುವುದರಿಂದ, ಜಿಲ್ಲೆಯ ಹಲವೆಡೆ ಅಡಿಕೆಯಲ್ಲಿ ಕೊಳೆರೋಗ ಕಾಣಿಸಿಕೊಂಡಿರುವುದು ತೋಟಗಾರಿಕೆ ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಅಲ್ಲದೇ ಮಳೆ ಇದೇ ರೀತಿ ಮುಂದುವರೆದರೆ ಆಗಸ್ಟ್ ತಿಂಗಳ ನಂತರ ಅಡಿಕೆ ಎಲೆ ಚುಕ್ಕೆ ರೋಗ ವ್ಯಾಪಕವಾಗಿ ಹರಡುವ ಸಾಧ್ಯತೆಯಿರುವ ಕಾರಣ ರೈತರು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ತಿಳಿಸಲಾಗಿದೆ.

ಅಡಿಕೆ ಬೆಳೆಯಲ್ಲಿ ಸಮಗ್ರ ಪೋಷಕಾಂಶ/ಕೀಟ/ರೋಗ ನಿರ್ವಹಣೆ ಸಂಬಂಧ ಗೊಬ್ಬರ/ಸೂಕ್ಷ್ಮ ಪೋಷಕಾಂಶ/ ಕೀಟನಾಶಕ/ ಶಿಲೀಂಧ್ರನಾಶಕಗಳನ್ನು ಖರೀದಿಸುವ ರೈತರಿಗೆ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಮಿಷನ್ ಯೋಜನೆಯ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಉಪಯೋಜನೆಯಡಿ ನವೀನ ತಂತ್ರಜ್ಞಾನಗಳು ಕಾರ್ಯಕ್ರಮದಡಿ ಸಹಾಯಧನ ಸೌಲಭ್ಯ ಲಭ್ಯವಿರುತ್ತದೆ. ರೈತರು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದು ಎಂದು ಇಲಾಖೆ ತಿಳಿಸಿದೆ.

ಹೆಚ್ಚಿನ ಮಾಹಿತಿಗೆ ದ.ಕ ತೋಟಗಾರಿಕೆ ಉಪನಿರ್ದೇಶಕ ಮಂಜುನಾಥ ಡಿ- 9448999226, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಪ್ರವೀಣ ಕೆ- 9449258204, ಬಂಟ್ವಾಳ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಜೋ ಪ್ರದೀಪ್ ಡಿಸೋಜ, - 9448206393, ಪುತ್ತೂರು ಹಿರಿಯ ಸಹಾಯಕ ತೋಟಗಾರಿಕೆ .ನಿರ್ದೇಶಕಿ ರೇಖಾ ಎ- 9731854527, ಸುಳ್ಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಪ್ರಮೋದ ಸಿ.ಎಮ್ – 9880993238, ಬೆಳ್ತಂಗಡಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಚಂದ್ರಶೇಖರ ಕೆ.ಎಸ್.- 9448336863 ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಓದಿಗೆ : www.theruralmirror.com

## ಆನೆ ದಾಳಿಯಿಂದ ಮಹಿಳೆ ಮೃತಪಟ್ಟ ಪ್ರಕರಣ ಅರಣ್ಯ ಇಲಾಖೆಯಿಂದ 20 ಲಕ್ಷ ಪರಿಹಾರ



ಕೆಲದಿನಗಳ ಹಿಂದೆ ಕೊಳ್ತಿಗೆ ಗ್ರಾಮದ ಕಣಿಯಾರ್ ಎಂಬಲ್ಲಿ ಆನೆ ದಾಳಿಯಿಂದ ಮೃತಪಟ್ಟಿದ್ದ ಕಾರ್ಮಿಕೆ ಸೆಲ್ಲಮ್ಮ ಅವರ ಕುಟುಂಬಕ್ಕೆ ಅರಣ್ಯ ಇಲಾಖೆಯಿಂದ 20 ಲಕ್ಷ ಪರಿಹಾರ ಮಂಜೂರಾಗಿದೆ.

ಎ.29 ರಂದು ಬೆಳಗ್ಗಿನ ಜಾವ ರಬ್ಬರ್ ಟ್ಯಾಪಿಂಗ್ ಮಾಡುತ್ತಿದ್ದ ವೇಳೆ ದಿಡೀರನೆ ಕಾಡಿನ ಕಡೆಯಿಂದ ಬಂದ ಆನೆ ಸೆಲ್ಲಮ್ಮ ಅವರಮೇಲೆ ದಾಳಿ ನಡೆಸಿ ಅವರನ್ನು ಕೊಂದು ಹಾಕಿತ್ತು. ಮೃತ ಸೆಲ್ಲಮ್ಮ ಅವರ ಕುಟುಂಬಕ್ಕೆ ಶಾಸಕ ಅಶೋಕ್ ರೈ ಅವರ ಶಿಫಾರಸ್ಸಿನಂತೆ 20 ಲಕ್ಷ ಪರಿಹಾರ ಮಂಜೂರಾಗಿದೆ. ಮಂಜೂರಾತಿ ಪತ್ರವನ್ನು ಅವರ ಪುತದರ ಯೋಗೀಶ್ವರ ಅವರಿಗೆ ಶಾಸಕರು ಹಸ್ತಾಂತರಿಸಿದರು. ಈ ವೇಳೆ ವಲಯ ಅರಣ್ಯಾಧಿಕಾರಿ ಕಿರಣ್ ಬಿ ಎಂ ಉಪಸ್ಥಿತರಿದ್ದರು.







# ದ ರೂರಲ್ ಮಿರರ್.ಕಾಂ

## ಮಳೆ ಪೀಡಿತ ಪ್ರದೇಶದ 11 ಶಾಲೆಗಳ ದುರಸ್ತಿ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾಕೃತಿಕ ವಿಕೋಪದಿಂದ ಹಾನಿಗೊಂಡಿರುವ 11 ಶಾಲೆಗಳನ್ನು ಕೇಂದ್ರ ಸರ್ಕಾರದ ಸಮಗ್ರ ಶಿಕ್ಷಾ ಯೋಜನೆಯಡಿ 2023-24 ಹಾಗೂ 2024- 25ನೇ ಸಾಲಿನಲ್ಲಿ ದುರಸ್ತಿಗೊಳಿಸುವುದಕ್ಕೆ ಅನುಮೋದನೆ ನೀಡಲಾಗಿದೆ ಎಂದು ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಕೇಳಿದ್ದ ಚುಕ್ಕೆ ಗುರುತಿಲ್ಲದ ಪ್ರಶ್ನೆಗೆ ಲಿಖಿತ ಉತ್ತರ ನೀಡಿರುವ ಸಚಿವರು, ಸಮಗ್ರ ಶಿಕ್ಷಾ ಯೋಜನೆಯಡಿ ರಾಜ್ಯ ಸರ್ಕಾರದ ಶಿಫಾರಸ್ಸಿನ ಮೇಲೆ ಆದ್ಯತೆಯಾಗಿ ಶಾಲೆಗಳನ್ನು ದುರಸ್ತಿಗೊಳಿಸುವ ಕಾರ್ಯ ನಡೆಯುತ್ತಿದೆ. ಪ್ರಬಂಧ್ ಪೋರ್ಟಲ್ ಪ್ರಕಾರ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮಗ್ರ ಶಿಕ್ಷಾ ಯೋಜನೆಯಡಿ ಕಳೆದ ಎರಡು ಸಾಲಿನಲ್ಲಿ 11 ಶಾಲೆಗಳನ್ನು ದೊಡ್ಡ ಮಟ್ಟದಲ್ಲಿ ದುರಸ್ತಿಗೊಳಿಸಲು ಅನುಮೋದನೆ ನೀಡಲಾಗಿದೆ. ಕೇಂದ್ರದ ಈ ಸಮಗ್ರ ಶಿಕ್ಷಾ ಯೋಜನೆಯು ರಿಪೇರಿಗೆ ಕಾಯುತ್ತಿರುವ ಶಾಲೆಗಳನ್ನು ಆದ್ಯತೆ ಮೇರೆಗೆ ದುರಸ್ತಿಗೊಳಿಸುವುದಕ್ಕೆ ರಾಜ್ಯ ಸರ್ಕಾರಗಳಿಗೆ ಹೆಚ್ಚಿನ ಅನುಕೂಲ ಕಲ್ಪಿಸುತ್ತದೆ. ಆ ಮೂಲಕ, ನೈಸರ್ಗಿಕ ವಿಕೋಪದಿಂದ ಹಾನಿಗೊಳಗಾಗುವ ಶಾಲೆಗಳನ್ನು ಯಥಾಸ್ಥಿತಿಗೆ ತರುವುದಕ್ಕೆ ಕೇಂದ್ರ ಸರ್ಕಾರದ ಸೂಕ್ತ ಆರ್ಥಿಕ ನೆರವು ಪಡೆದುಕೊಳ್ಳಬಹುದು ಎಂದು ಅವರು ಹೇಳಿದ್ದಾರೆ.

ಮಳೆ ಪೀಡಿತ ಪ್ರದೇಶಗಳ ಶಾಲೆಗಳನ್ನು ತುರ್ತಾಗಿ ದುರಸ್ತಿಗೊಳಿಸಿ ಅವುಗಳಿಗೆ ಸೂಕ್ತ ಮೂಲಸೌಕರ್ಯ ಮರುಸ್ಥಾಪಿಸುವುದಕ್ಕೆ ಕೇಂದ್ರ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ(NDMA)ದ ಸಮನ್ವಯದಲ್ಲಿ ಪ್ರತ್ಯೇಕ ಮಾರ್ಗಸೂಚಿ ಹಾಗೂ ಸಲಹೆಗಳನ್ನು ಬಿಡುಗಡೆಗೊಳಿಸಿದೆ. ಈ ನಡುವೆ ಕೇಂದ್ರ ಸರ್ಕಾರವು ನೈಸರ್ಗಿಕ ವಿಪತ್ತು ನಿರ್ವಹಣಾ ನಿಧಿಯಡಿ



ದಕ್ಷಿಣ ಕನ್ನಡದಲ್ಲಿ 2024-25ನೇ ಸಾಲಿನಲ್ಲಿ 240 ಹಾಗೂ ರಾಜ್ಯ ಸರ್ಕಾರದ ನಿಧಿಯಡಿ 312 ಶಾಲಾ ಕಟ್ಟಡಗಳ ದುರಸ್ತಿ ಕಾರ್ಯ ಕೈಗೊಂಡಿರುವುದಾಗಿ ಸಚಿವ ಚೌಧರಿ ವಿವರಿಸಿದರು.

ಸಂಸತ್ತಿನ ಮುಂಗಾರು ಅಧಿವೇಶನ ಇಂದಿನಿಂದ ಆರಂಭವಾಗಿದ್ದು, ಸಂಸದ ಕ್ಯಾ. ಚೌಟ ಅವರು ದಕ್ಷಿಣ ಕನ್ನಡದಲ್ಲಿ ಅತಿವೃಷ್ಟಿಗೆ 290ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳ ಮೂಲಸೌಕರ್ಯಕ್ಕೆ ಹಾನಿಯಾಗಿದ್ದು, ಅವುಗಳ ದುರಸ್ತಿ ಕಾರ್ಯಕ್ಕೆ ತುರ್ತಾಗಿ ಕೇಂದ್ರ ಸರ್ಕಾರದ ನೆರವು ಕೋರಿದ್ದರು. ದಕ್ಷಿಣ ಕನ್ನಡವು ಸೇರಿದಂತೆ ಕರಾವಳಿ ಭಾಗದಲ್ಲಿ ಮಳೆ ಪೀಡಿತ ಪ್ರದೇಶಗಳಲ್ಲಿ ಹಾನಿಗೊಂಡಿರುವ ಶಾಲೆಗಳ ರಿಪೇರಿ ಹಾಗೂ ಅಗತ್ಯ ಮೂಲಸೌಕರ್ಯ ಒದಗಿಸುವುದಕ್ಕೆ ಏನೆಲ್ಲ ತುರ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂಬುದರ ಬಗ್ಗೆ ಚುಕ್ಕೆಗುರುತಿಲ್ಲದ ಪ್ರಶ್ನೆಯಡಿ ಮಾಹಿತಿ ಕೋರಿದ್ದರು.

ಈ ಬಗ್ಗೆ ಪ್ರತಿಕ್ರಿಯಿಸಿರುವ ಕ್ಯಾ. ಚೌಟ ಅವರು, ಮಳೆ ಪೀಡಿತ ಪ್ರದೇಶಗಳ ಶಾಲೆಗಳನ್ನು ಸಮಗ್ರ ಶಿಕ್ಷಾ ಯೋಜನೆಯಡಿ ರಿಪೇರಿಗೆ ಆದ್ಯತೆಯಡಿ ಅನುಮೋದನೆ ನೀಡಿರುವುದು ಸ್ವಾಗತಾರ್ಹ ಕ್ರಮ. ಆರಂಭಿಕ ಹಂತದಲ್ಲಿ ಜಿಲ್ಲೆಯ 11 ಶಾಲೆಗಳ ದುರಸ್ತಿಗೆ ಅನುಮೋದನೆ ಸಿಕ್ಕಿದೆ. ಮುಂದೆ ಮಳೆಯಿಂದ ಹಾನಿಗೊಳಗಾಗಿರುವ ದಕ್ಷಿಣ ಕನ್ನಡದ 290 ಶಾಲೆಗಳ ದುರಸ್ತಿ ಕಾರ್ಯಕ್ಕೂ ಕೇಂದ್ರ ಸರ್ಕಾರದಿಂದ ಹೆಚ್ಚಿನ ಆರ್ಥಿಕ ನೆರವು ಪಡೆಯುವುದಕ್ಕೆ ಎಲ್ಲ ರೀತಿಯ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

## ರಾಜ್ಯದ ಉತ್ತರ ಒಳನಾಡಿನಲ್ಲಿ ನೈರುತ್ಯ ಮುಂಗಾರು ಸಕ್ರಿಯ

: ರಾಜ್ಯದ ಉತ್ತರ ಒಳನಾಡಿನಲ್ಲಿ ನೈರುತ್ಯ ಮುಂಗಾರು ಸಕ್ರಿಯವಾಗಿತ್ತು. ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಮುಂದಿನ ಮೂರು ದಿನಗಳಲ್ಲಿ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಇಂದು ಮತ್ತು ನಾಳೆ ರಾಜ್ಯದ ಕರಾವಳಿಯಲ್ಲಿ  ಬಿರುಗಾಳಿ ಬೀಸುವ ಸಾಧ್ಯತೆ ಇದ್ದು, ಈ ಅವಧಿಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ.

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆ ಹಿನ್ನೆಲೆ ರೊಬಾಸ್ಟ ಕಾಫಿ ಬೆಳೆಗಾರರಿಗೆ ಸಂಕಷ್ಟ

ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಸ್ತುತ ಮಳೆಯ ಪ್ರಮಾಣದಲ್ಲಿ ಏರು ಪೇರು ಉಂಟಾಗುತಿದ್ದು, ಕೆಲವೆಡೆ ಬೆಳೆಗಾರರಿಗೆ ಸಂಕಷ್ಟ ಎದುರಾಗಿದೆ. ಕಳೆದ ೨ ತಿಂಗಳ ಕಾಲ ಉಂಟಾದ ಸತತ ಮಳೆಯಿಂದ ಕಳಸ ತಾಲೂಕಿನ ಕೆಲವೆಡೆ ರೋಬಸ್ಟ ಕಾಫಿಯಲ್ಲಿ ಕೊಳೆ ರೋಗ ಕಂಡುಬಂದಿದೆ . ಮೂಡಿಗೆರೆ ತಾಲೂಕಿನಲ್ಲಿ ಹೆಚ್ಚು ಮಳೆಯಿಂದ ಕೆಲವೆಡೆ ಕಾಳು ಮೆಣಸು ಹಾಗು ಕಾಫಿ ನೆಲಕುದುರಿವೆ. ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.



ಹೆಚ್ಚಿನ ಓದಿಗೆ : www.theruralmirror.com